## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | **979(1198)** |
| ಸದಸ್ಯರ ಹೆಸರು | ಡಾ॥ ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 16.03.2020 |
| ಉತ್ತರಿಸುವ ಸಚಿವರು | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಸರ್ಕಾರಿ ಶಾಲೆಗಳಲ್ಲಿನ ಸಹ ಶಿಕ್ಷಕರಿಗೆ ಮುಖ್ಯೋಪಧ್ಯಾಯರಾಗಿ ಬಡ್ತಿ ನೀಡಲು ವಿಳಂಬಧೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಿ.ಕೆ. ಪವಿತ್ರ ಪ್ರಕರಣ ಹಾಗೂ ಜೇಷ್ಠತಾ ಪಟ್ಟಿಗಳಲ್ಲಿನ ಗೊಂದಲದಿಂದಾಗಿ ವಿಳಂಬವಾಗಿರುವುದು ಸರ್ಕಾರದ ಗಮನದಲ್ಲಿದೆ |
| ಆ. | ಬಂದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಅರ್ಹ ಸಹ ಶಿಕ್ಷಕರನ್ನು ಮುಖ್ಯೋಪಾಧ್ಯಾಯರಾಗಿ ಬಡ್ತಿ ನೀಡಲಾಗುವುದು? | 1. 2019-20ನೇ ಸಾಲಿನಲ್ಲಿ ಕಲಬುರ್ಗಿ ವಿಭಾಗದ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರಿಗೆ ದಿನಾಂಕ:01/01/2020ರಲ್ಲಿದಂತೆ ಬಡ್ತಿಗಾಗಿ ನಿಗಧಿಪಡಿಸಿದ, ಒಟ್ಟು: 455 ಗ್ರೂಪ್-"ಬಿ" ವೃಂದದ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಹುದ್ದೆಗಳಿಗೆ ದಿನಾಂಕ:03/01/2020ರಂದು ಬಡ್ತಿ ನೀಡಲಾಗಿದೆ. ಬಡ್ತಿ ಹೊಂದಿದ ಮುಖ್ಯ ಶಿಕ್ಷಕರಿಗೆ ದಿನಾಂಕ:06/03/2020ರಂದು ಸ್ಥಳ ನಿಯುಕ್ತಿಗೊಳಿಸಲು ಕೌನ್ಸಿಲಿಂಗ್ ನಡೆಸಲಾಗಿದೆ.<br><br>2. 2019-20ನೇ ಸಾಲಿನಲ್ಲಿ ಧಾರವಾಡ ವಿಭಾಗ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರಿಗೆ ಗ್ರೂಪ್-"ಬಿ" ವೃಂದದ ಸರ್ಕಾರಿ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಒಟ್ಟು: 229 ಹುದ್ದೆಗಳಿಗೆ, ದಿನಾಂಕ:09/09/2019ರಂದು ಕೌನ್ಸಿಲಿಂಗ್ ಮೂಲಕ ಬಡ್ತಿ ನೀಡಲಾಗಿದೆ.<br><br>3. ಬೆಂಗಳೂರು, ಮೈಸೂರು ವಿಭಾಗಗಳಲ್ಲಿ ಹಾಲಿ ಚಾಲ್ತಿಯಲ್ಲಿದ್ದ ಪ್ರೌಢ ಶಾಲಾ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯಲ್ಲಿ ಲೋಪದೋಷಗಳು ಕಂಡು ಬಂದಿವೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಪತ್ರ ಸಂಖ್ಯೆ: ಇಡಿ 152 ಎಲ್‌ಬಿಪಿ 2014, ದಿನಾಂಕ:20/05/2014ರಲ್ಲಿ ನೀಡಿರುವ ನಿರ್ದೇಶನಗಳಂತೆ, ಪ್ರೌಢಶಾಲಾ ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ಹಾಗೂ ರೋಸ್ಟರ್ ಮೆರಿಟ್ ಆಧಾರದ ಮೇಲೆ, ಬೆಂಗಳೂರು ಮತ್ತು ಮೈಸೂರು ವಿಭಾಗವಾರು ಪ್ರತ್ಯೇಕವಾಗಿ ಅಂತಿಮಗೊಳಿಸಬೇಕಾಯಿತು. ಈ ಕಾರಣದಿಂದ ಮುಂಬಡ್ತಿ ಪ್ರಕ್ರಿಯೆ ವಿಳಂಬವಾಗಿರುತ್ತದೆ.<br><br>ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಬೆಂಗಳೂರು ಮತ್ತು ಮೈಸೂರು ವಿಭಾಗವಾರು ಪ್ರತ್ಯೇಕವಾಗಿ ದಿನಾಂಕ:06/02/2020ರಂದು |

ಪ್ರಕಟಿಸಲಾಗಿದೆ. ಅಂತಿಮ ಜ್ಯೇಷ್ಠತಾ ಪಟ್ಟಿಯ ಅನುಸಾರ ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರ ವೃಂದಕ್ಕೆ ಅರ್ಹರಾಗುವ ಶಿಕ್ಷಕರುಗಳ ತಾತ್ಕಾಲಿಕ ಅರ್ಹತಾ ಪಟ್ಟಿಯನ್ನು ದಿನಾಂಕ:07/02/2020ರಂದು ಪ್ರಕಟಿಸಿದೆ. ಬಡ್ತಿ ನೀಡುವ ಸಂಬಂಧ ಕಾರ್ಯ ನಿರ್ವಹಣಾ ವರದಿ ಹಾಗೂ ಪೂರಕ ದಾಖಲೆಗಳನ್ನು ಪಡೆಯಲಾಗಿದ್ದು, ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರ ವೃಂದಕ್ಕೆ ಬಡ್ತಿ ನೀಡುವ ಪ್ರಕ್ರಿಯೆ ಚಾಲನೆಯಲ್ಲಿದೆ.

ಬೆಂಗಳೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ದಿನಾಂಕ:06/02/2020ರಂದು ಪ್ರಕಟಿಸಲಾಗಿರುತ್ತದೆ. ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ 312 ಖಾಲಿ ಇರುವ ಹುದ್ದೆಗಳಿಗೆ ಬಡ್ತಿ ನೀಡುವ ಸಂಬಂಧ ದಿನಾಂಕ:10/03/2020ರಂದು ಇಲಾಖಾ ಮುಂಬಡ್ತಿ ಸಮಿತಿ ಸಭೆಯ ಅನುಮೋದನೆ ಪಡೆಯಲಾಗಿದೆ. ಸದರಿ ಸಮಿತಿಯ ನಿರ್ಣಯದಂತೆ, ಶೀಘ್ರವಾಗಿ ಮುಖ್ಯ ಶಿಕ್ಷಕರ ಖಾಲಿ ಹುದ್ದೆಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ

4. ಮೈಸೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅಂತಿಮವಾಗಿ ಆಕ್ಷೇಪಣೆಗಳು ಸ್ವೀಕೃತವಾಗಿರುವುದರಿಂದ, ಆಕ್ಷೇಪಣೆಗಳನ್ನು ಸರಿಪಡಿಸಿ, ಜ್ಯೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ, ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ 410 ಖಾಲಿಯಿರುವ ಹುದ್ದೆಗಳಿಗೆ ಬಡ್ತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಸಂಖ್ಯೆ: ಇಡಿ 36 ಎಸ್‌ಒಹೆಚ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು